ಗಂಡನ್ನ ತೃಪ್ತಿಪಡಿಸಲು ಆಗಲಿಲ್ಲ. ಅಂವ ಕೌಶಿಕ ಒಟ್ಟ ತಿರಸಟ್ಟಿ. ಆಕಿ ಬಾಡಿ ಕೋಮಲ ಇತ್ತು. ಶಿ ಕುಡ್ ನಾಟ್ ಟಾಲರೆಟ್ ಹಿಸ್ ವೈಲನ್ಸ್. ಗಂಡಸು ಬೇಕು. ಆದರೆ, ಇಂಥಾ ಕ್ರೂರ ಗಂಡ ಬ್ಯಾಡ ಅಂತ್ಹೇಳಿ ಚೆನ್ನಮಲ್ಲಿಕಾರ್ಜುನನ್ನ ಹುಡ್ಕೊಂಡು ಹೋದಳು. ಶಿ ನೀಡ್ಸ್ ಎ ಕಂಪ್ಯಾನಿಯನ್. ಚೆನ್ನಮಲ್ಲಿಕಾರ್ಜುನ ತನ್ನ ಗಂಡ ಅಂತ ಸಿಂಬಲ್ ಇಟಕೊಂಡು ವಚನ ಬರದಳು. ಚೆನ್ನಮಲ್ಲಿಕಾರ್ಜುನನ ಬಿಟ್ಟು ಉಳದೋರನೆಲ್ಲ ಭಂಡರು ಅಂದಳು.

◆ ನೀವು ಮದುವೆ ಯಾಕೆ ಆಗಲಿಲ್ಲ?

ಬಡತನದಿಂದ. ಹೊಟ್ಟೆ ಹಸಿವಿನ ಮುಂದೆ ದೇಹದ ಹಸಿವು ಯಾವ ಲೆಕ್ಕ? ನಮ್ಮಪ್ಪ ಜಾತಕ ಅನ್ನಾಂವ. ನಾವು ಡಬಲ್ ಗ್ರಾಜುಯೇಟ್ಸು. ಸಾವಿರಕ್ಕ ಒಂದು ಜಾತಕ ಹೊಂದೋದು. ಅಪ್ಪಯ್ಯನ ಚಪ್ಪಲ್ ಹರದ ಹೋಗೋದು. ಹೊಸ ಚಪ್ಪಲ್ ಕೊಡಸಬೇಕಂದ್ರ ನಾವು ನಾಲಕ್ಕನಿ ಟೂಶನ್ ಜಾಸ್ತಿ ಹೇಳಬೇಕು. ಇಷ್ಟು ಬಡತನವಿದ್ದರೂ ಯಾರನ್ನೂ ಬೇಡಲಿಲ್ಲ. ಕಾಡಲಿಲ್ಲ. ಈ ಮಣ್ಣೊಳಗೆ ಸತ್ವ ಹೀರಿಕೊಂಡು ಬೆಳದಿವಿ.

◆ ಆಧುನಿಕ ಸ್ತ್ರೀವಾದದ ಬಗ್ಗೆ ನಿಮ್ಮ ಅಭಿಪ್ರಾಯ ಕೇಳಬೇಕು.

ಒಟ್ಟ ಈ ಸ್ತ್ರೀವಾದ ನನಗ ಇಷ್ಟವಿಲ್ಲ. ವಾಟೆವರ್ ಐ ಫೀಲ್, ಐ ರೈಟ್. ಈ ಬಾಡಿ ಹಾರ್ಮೋನ್ಸ್ ಚೇಂಜದೊಳಗ ನಾವೆಲ್ಲ ಒಂದೇ ಹ್ಯೂಮನ್ ಬೀಯಿಂಗ್ಸ್. ಅಟ್ ದಿ ಸೇಮ್ ಟೈಂ, ಹರ್ ಸೆಕ್ಸುವಲ್ ಸ್ಯಾಟಿಸ್‌ಫ್ಯಾಕ್ಷನ್ ವಿಲ್ ಬಿ ಕಂಪ್ಲೀಟೆಡ್ ಬೈ ಎ ಮ್ಯಾನ್ ಓನ್ಲಿ. ದೆರೀಸ್ ಕಂಪಲ್ಸರಿ ಅಟೆಂಡನ್ಸ್ ಆಫ್ ಎ ಮ್ಯಾನ್ ಟು ವುಮನ್ಸ್ ಲೈಫ್. ಜೀವನದ ತತ್ವ ಅದು. ಅರ್ಧನಾರೀಶ್ವರ ಕಾನ್ಸೆಪ್ಟ್ ಏನಂದರ, ಶಿವ–ಪಾರ್ವತಿ. ಪ್ರತಿ ಗಂಡೊಳಗೆ ಒಬ್ಬ ಹೆಣ್ಣಿರ್ತಾಳ. ಪ್ರತಿ ಹೆಣ್ಣೊಳಗ ಒಬ್ಬ ಗಂಡಿರ್ತಾನ. ಒಬ್ಬರು ಬಿಟ್ಟರೆ ಇನ್ನೊಬ್ಬರಿಲ್ಲ. ಈಗ ಯಾರಾದರೂ ಕಂಡರೆ ನನ್ನ ಫ್ರೆಂಡ್ ಅನ್ತೀನಿ. ಈಗ ಅದನ್ನೆಲ್ಲ ಮೀರಿ ಹೋಗಿಬಿಟ್ಟೇನಿ.

◆ ಹಿಂತಿರುಗಿ ನೋಡುವಾಗ ಜೀವನ ಹೇಗನಿಸುತ್ತೆ?

ನೋ ರಿಪೆಂಟೆನ್ಸ್. ಐ ಮೇಂಟೆನ್ಡ್ ದಿ ಡಿಗ್ನಿಟಿ ಆಫ್ ಲೈಫ್. ಇಫ್ ಯು ಆರ್ ಮಾರಲಿ ಸ್ಟ್ರಾಂಗ್ ಇದು ಬರುತ್ತೆ.

◆ ನೀವು ಜೀವನದಲ್ಲಿ ದೊಡ್ಡದು ಅಂತ ಭಾವಿಸೊ ಆದರ್ಶ ಯಾವುದು?

ಪ್ರೀತಿ. ಅದಕ್ಕ ರೊಕ್ಕ ಬೇಡ ರೂಪಾಯಿ ಬೇಡ. ಸುಮ್ನೆ ಹಂಚಿಕೊಂಡು ಹೋಗಬೇಕು. ನಾನು ಜಾಬ್ ಕಳಕೊಂಡಾಗ ನಮ್ಮಕ್ಕ, 'ಕಕ್ಕೂ, ಸಾಲಿ ಬಿಡಿಸಿದರೇನಾತು? ಒಂದು ಬೇವಿನಮರದ ಕೆಳಗ ಕುಂತು ನಾಲ್ಕು ಮಕ್ಕಳಿಗೆ ಪ್ರೀತಿ ಹಂಚು' ಅಂದಿದ್ಲು. ಪ್ರೀತಿ ಹಂಚಿದಷ್ಟೂ ತನು ತುಂಬತೈತಿ. ಬಾವಿಗೆ ಮ್ಯಾಲಿಂದ ನೀರುಬಿಟ್ಟರ ಕಳಕಾಗೈತಿ. ಕೆಳಗಿಂದ ಜಗ್ಗಿಜಗ್ಗಿ ತಗದ ಹಂಚಿದರ ಸೆಲಿ ಉಕ್ಕತೈತಿ. ಈಗ ನೀವು ನಮ್ಮನಿಗೆ ಬಂದಿರಿ. ಯಾವ ಕಾರಣಕ್ಕ ಬಂದಿರಿ? ಕಾರಣವಿಲ್ಲದ ಪ್ರೀತಿ. ನೀವೆಲ್ಲೇ ಹೋಗರಿ, ಪ್ರೀತಿ ಇದ್ದರೆ ಮಾತ್ರ ಒಳ್ಳೇ ಬರಹ ಹುಟ್ಟತದ. ಅಂತಃಕರಣ ಆರ್ದ್ರತೆ ಇಲ್ಲದೆ ದೊಡ್ಡ ಸಾಹಿತ್ಯ ಹುಟ್ಟೋಲ್ಲ. ಈಗ ಈ ಅಂತಃಕರಣ ಇರೋ ಎಷ್ಟೆಷ್ಟು ಒಳ್ಳೇ ಕತೆ ಕವಿತೆಗಳು ಬರ್ತಿದಾವ್ರೀ ಹೊಸ ತಲೆಮಾರಿನಿಂದ. ಸಂತೋಷ ಆಗ್ತದ.